## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೇಂದ್ರ ಯೋಜನೆಯಡಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪಡೆಯುತ್ತಿರುವ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ/ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** 1. ಭಾರತ ಸರ್ಕಾರದ ಉಪ ಕಾರ್ಯದರ್ಶಿ, ಬುಡಕಟ್ಟು ವ್ಯವಹಾರಗಳ ಮಂತ್ರಾಲಯ, ನವದೆಹಲಿ, ಇವರ ಪತ್ರ ಸಂಖ್ಯೆ:20014/5/2002-ಎಜುಕೇಷನ್ ದಿ:23.05.2013.

2. ನಿರ್ದೇಶಕರು,ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಏಕಕಡತ ಸಂಖ್ಯೆ:ಪವಕನಿ/ಇಡಿ-4/ಸಿಆರ್-2/2013-14, ದಿನಾಂಕ 16-07-2013.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿನ ಕೇಂದ್ರ ಸರ್ಕಾರದ ಪತ್ರದಲ್ಲಿ 2013-14 ನೇ ಶೈಕ್ಷಣಿಕ ಸಾಲಿನ ದಿ:01.04.2013ರಿಂದ ಜಾರಿಗೆ ಬರುವಂತೆ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳ ಪೋಷಕರ/ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ.2.00ಲಕ್ಷಗಳಿಂದ ರೂ.2.50 ಲಕ್ಷಗಳಿಗೆ ಹೆಚ್ಚಿಸಿ ಪರಿಷ್ಕರಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಏಕಕಡತದಲ್ಲಿ ರಾಜ್ಯದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಅನುಕೂಲವಾಗುವಂತೆ ಭಾರತ ಸರ್ಕಾರದ ಪತ್ರದಲ್ಲಿರುವಂತೆ ವಾರ್ಷಿಕ ಆದಾಯ ಮಿತಿಯನ್ನು ರೂ.2.00ಲಕ್ಷಗಳಿಂದ ರೂ.2.50 ಲಕ್ಷಗಳಿಗೆ ಹೆಚ್ಚಿಸಿ ಪರಿಷ್ಕರಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 166 ಪವಯೋ 2013, ಬೆಂಗಳೂರು**
**ದಿನಾಂಕ: 08-8-2013**

ಕೇಂದ್ರ ಪುರಸ್ಕೃತ ಯೋಜನೆಯಡಿ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಅನುಕೂಲವಾಗುವಂತೆ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿಯನ್ನು 2013-14ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ರೂ.2.00ಲಕ್ಷಗಳಿಂದ ರೂ.2.50(ರೂ.ಎರಡು ಲಕ್ಷದ ಐವತ್ತು ಸಾವಿರಗಳು ಮಾತ್ರ) ಲಕ್ಷಗಳಿಗೆ ಹೆಚ್ಚಿಸಿ ಪರಿಷ್ಕರಿಸಿ ಆದೇಶಿಸಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 04ಟಿಎಫ್‌ಪಿ2012, ದಿನಾಂಕ:27-06-2012 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

<u>ಇವರಿಗೆ:</u>

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿಭವನ, ಬೆಂಗಳೂರು.
3) ಎಲ್ಲಾ ಜಿಲ್ಲಾಧಿಕಾರಿಗಳು.
4) ಎಲ್ಲಾ ಜಿಲ್ಲಾಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು.
5) ಎಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ/ಜಿಲ್ಲಾ ಸಮಾಜ ಕಲ್ಯಾಣಧಿಕಾರಿ/ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನಾ.

} ನಿರ್ದೇಶಕರು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಮುಖಾಂತರ

6) ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ಶಾಖಾ ರಕ್ಷ ಕಡತ.
9) ಹೆಚ್ಚುವರಿ ಪ್ರತಿ-03.